**ಗ್ರಾಮೀಣಾಭಿವೃದ್ಧಿಮತ್ತುಪಂ.ರಾಜ್‌ಇಲಾಖೆ**

**ಅಧಿಸೂಚನೆ**

**ಸಂಖ್ಯೆ:ಗ್ರಾಅಪಂರಾ 87 ಜಿಪಸ 2020, ಬೆಂಗಳೂರು, ದಿನಾಂಕ:05-05-2020**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ರ ಪ್ರಕರಣ 138 ರೊಂದಿಗೆ ಓದಿಕೊಂಡಂತೆ ಪ್ರಕರಣ 311ರ ಉಪ ಪ್ರಕರಣ (1)ರ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಪಂಚಾಯತ್ ರಾಜ್(ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ) ನಿಯಮಗಳು, 2005ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಕರಡು ಅಧಿಸೂಚನೆಯನ್ನು ಪ್ರಕಟಿಸಿದೆ. ಈ ಮೂಲಕ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಿ ಸದರಿ ಆಕ್ಷೇಪಣೆ ಮತ್ತು ಸಲಹೆಗಳನ್ನು ಈ ನಿಯಮಗಳು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿತವಾದ ದಿನಾಂಕದಿಂದ ಹದಿನೈದು ದಿನಗಳೊಳಗಾಗಿ ಕಳುಹಿಸಲು ಈ ಮೂಲಕ ಸೂಚಿಸಲಾಗಿದೆ.

ಮೇಲೆ ನಿರ್ದಿಷ್ಟಪಡಿಸಿದ ಅವಧಿಯು ಮುಕ್ತಾಯವಾಗುವ ಮೊದಲು ಸದರಿ ಕರಡು ನಿಯಮಗಳಿಗೆ ಸಂಬಂಧಿಸಿದಂತೆ ಯಾವೊಬ್ಬ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಮತ್ತು

ಸಲಹೆಗಳನ್ನು ರಾಜ್ಯ ಸರ್ಕಾರವು ಪರಿಗಣಿಸುವುದು. ಆಕ್ಷೇಪಣೆ ಅಥವಾ ಸಲಹೆಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, 3ನೇ ಹಂತ, 3ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ||ಅಂಬೇಡ್ಕರ್ ವೀದಿ, ಬೆಂಗಳೂರು-01 ಇವರಿಗೆ ಕಳುಹಿಸಲು ಕೋರಲಾಗಿದೆ.

**ಕರಡು ನಿಯಮಗಳು**

1. **ಹೆಸರು ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ) (ತಿದ್ದುಪಡಿ) ನಿಯಮಗಳು, 2020 ಎಂದು ಕರೆಯತಕ್ಕದ್ದು.

(2) ಇವು ರಾಜ್ಯ ಪತ್ರದಲ್ಲಿ ಅಂತಿಮವಾಗಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

2. **ನಿಯಮ 3ಕ್ಕೆ ತಿದ್ದುಪಡಿ:-** ಕರ್ನಾಟಕ ಪಂಚಾಯತ್ ರಾಜ್ (ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿ)ನಿಯಮಗಳು, 2005ರ (ಇಲ್ಲಿ ಇನ್ನು ಮುಂದೆ ಮೂಲ ನಿಯಮಗಳೆಂದು ಉಲ್ಲೇಖಿತವಾಗಿದೆ), ನಿಯಮ 3ರ ಉಪ ನಿಯಮ (1)ರಲ್ಲಿ ಕೋಷ್ಟಕದ ಬದಲಿಗೆ ಈ ಕೆಳಗಿನಂತೆ ಪ್ರತ್ಯಾಯೋಜಿಸತಕ್ಕದ್ದು. ಅಂದರೆ:-

**"ಕೋಷ್ಟಕ**

| ಕ್ರ. ಸಂ. | ಪ್ರವರ್ಗ | ಅಧ್ಯಕ್ಷರು | | ಉಪಾಧ್ಯಕ್ಷರು | |
|---|---|---|---|---|---|
| | | ಒಟ್ಟು | ಮಹಿಳೆಯರು | ಒಟ್ಟು | ಮಹಿಳೆಯರು |
| 1 | ಅನುಸೂಚಿತ ಜಾತಿ | 45 | 23 | 45 | 23 |
| 2 | ಅನುಸೂಚಿತ ಪಂಗಡ | 21 | 10 | 21 | 10 |
| 3 | ಹಿಂದುಳಿದ ವರ್ಗಗಳು ಪ್ರವರ್ಗ-ಎ | 38 | 19 | 38 | 19 |
| | ಪ್ರವರ್ಗ-ಬಿ | 9 | 5 | 9 | 5 |
| 4 | ಮೀಸಲಿಡದ ಸಾಮಾನ್ಯ ವರ್ಗ | 113 | 56 | 113 | 56 |
| | ಒಟ್ಟು | 226 | 113 | 226 | 113 |

2. **ಪದಾವಳಿಗಳ ಪ್ರತಿಯೋಜನೆ.-** ಮೂಲ ನಿಯಮಗಳಲ್ಲಿ ಪೀಠಿಕೆ, ನಿಯಮ 1 ಮತ್ತು 2ರಲ್ಲಿ ಕಂಡುಬರುವ "ಪಂಚಾಯತ್ ರಾಜ್" ಎಂಬ ಪದಾವಳಿಗಳ ಬದಲಿಗೆ "ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್" ಎಂಬ ಪದಾವಳಿಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತುಅವರ ಹೆಸರಿನಲ್ಲಿ,

(ಸಿ.ಮಂಜೂರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

PR-155